ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:**1084/2023**

ಪಿ.ಡಬ್ಲ್ಯೂ**-1**
ಸಿ.ಡಬ್ಲ್ಯೂ**-1**

ಸಾಕ್ಷಿಗೆ ದಿನಾಂಕ **30-01-2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಗಂಗಮ್ಮ

ಗಂಡನ ಹೆಸರು : ತಿಮ್ಮಯ್ಯ

ವಯಸ್ಸು : 40 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಜೋಗಮ್ಮನ ಹಳ್ಳಿ ಗ್ರಾಮ

<u>ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ</u>

ನ್ಯಾಯಾಲಯದ ಮುಂದೆ ಹಾಜರಿರುವ 1 ರಿಂದ 4 ನೇ ಆರೋಪಿತರು ಸಂಬಂಧಿಕರಾಗಬೇಕು. ಚಾಸಾ 2 ಮತ್ತು 4 ರವರ ಪರಿಚಯವಿರುತ್ತದೆ. ಚಾಸಾ -3 ರವರ ಪರಿಚಯವಿರುವುದಿಲ್ಲ. ಚಾಸಾ 5 ನನ್ನ ನಾದಿನಿ.

ನನ್ನ ಮತ್ತು ಆರೋಪಿತರ ನಡುವೆ ಯಾವುದೇ ಜಗಳ ನಡೆದಿಲ್ಲ. ಆರೋಪಿತರು ಅವಾಚ್ಯ ಶಬ್ದಗಳಿಂದ ನಿಂದಿಸಿಲ್ಲ ಮತ್ತು ನನ್ನ ಮೇಲೆ ಹಲ್ಲೆ ಮಾಡಿಲ್ಲ. ನನ್ನ ಮಾನಕ್ಕೆ ಕುಂದುಂಟು ಮಾಡಿರುವುದಿಲ್ಲ. ಘಟನೆಗೆ ಸಂಬಂಧಿಸಿದಂತೆ ನಾನು ಪೊಲೀಸರ ಮುಂದೆ ಯಾವುದೇ ದೂರನ್ನು ನೀಡಿರುವುದಿಲ್ಲ.

ಸಾಕ್ಷಿಯು ದೂರನ್ನು ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ದೂರನ್ನು ನಿಪಿ-01 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-01(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕೃತ್ಯ ಸ್ಥಳ ಪಂಚನಾಮೆ ಮತ್ತು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು, ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ನನ್ನ ಸಮಕ್ಷಮ ಪೊಲೀಸರು ಮಹಜರ್ ಮಾಡಿ ಯಾವುದೇ ಸ್ವತ್ತನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ನಿಪಿ-1 ರಿಂದ 3 ರಲ್ಲಿರುವ ವಿಚಾರಗಳು ನನಗೆ

ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)**

<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>

ದಿಃ 13.07.2023 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ನಾನು ಒಬ್ಬಳೇ ಕಪ್ಪಗೆರೆ ಕ್ರಾಸ್ ಬಳಿ ನಡೆದುಕೊಂಡು ಬರುವಾಗ ಹೊಸದುರ್ಗ ಕಡೆಯಿಂದ ಆರೋಪಿಗಳು ಬರುತ್ತಿದ್ದು ಅವರ ಪೈಕಿ 1 ಮತ್ತು 2 ನೇ ಆರೋಪಿಗಳು ನನ್ನನ್ನು ನೋಡಿ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ . ನನ್ನ ತಲೆ ಕೂದಲು ಹಿಡಿದು ಎಳೆದಾಡಿ ಕಾಲಿನಿಂದ ಹೊಡೆದರು ಎಂದರೆ ಸರಿಯಲ್ಲ . 3 ಮತ್ತು 4 ನೇ ಆರೋಪಿಗಳು ಸಹ ನನಗೆ ಕೈ ಕಾಲುಗಳಿಂದ ಹೊಡೆದರು ಎಂದರೆ ಸರಿಯಲ್ಲ . ನನ್ನ ಸೀರೆಯನ್ನು ಹರಿದು ನನ್ನ ಮಾನಕ್ಕೆ ಕುಂದುಂಟುಮಾಡಿದರು ಎಂದರೆ ಸರಿಯಲ್ಲ . ಆಗ ನಾನು ಕೂಗಿಕೊಂಡಿದ್ದು, ಚಾಸಾ 4 ಮತ್ತು 5 ರವರು ನನ್ನನ್ನು ಬಿಡಿಸಿದರು ಎಂದರೆ ಸರಿಯಲ್ಲ . ನಂತರ ನನ್ನನ್ನು ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ದಾಖಲಿಸಿ ಚಿಕಿತ್ಸೆ ಕೊಡಿಸಿದರು ಎಂದರೆ ಸರಿಯಲ್ಲ. ಈ ಕುರಿತು ದಿಃ 26.07.2023 ರಂದು ನಾನು ಪೊಲೀಸರಿಗೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ .

ದಿನಾಂಕ 26.07.2023 ರಂದು ಪೊಲೀಸರ ಘಟನಾ ಸ್ಥಳಕ್ಕೆ ಬಂದಾಗ ನಾನು ಸ್ಥಳದಲ್ಲಿ ಹಾಜರಿದ್ದು, ಸ್ಥಳ ತೋರಿಸಿದಂತೆ ಚಾಸಾ. 2 ಮತ್ತು 3 ರ ಸಮಕ್ಷಮ ನಿಪಿ-2 ರಂತೆ ಸಂಜೆ 5.00 ರಿಂದ 5.45 ಗಂಟೆಯ ವರೆಗೆ ಮಹಜರ್ ಕ್ರಮ ಜರುಗಿಸಿ ಕಲ್ಲನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ . ಈ ಸಂದರ್ಭದಲ್ಲಿ ನಿಪಿ-3 ರನ್ನು ಸಹ ಬರೆಯಲಾಗಿತ್ತು ಎಂದರೆ ಸರಿಯಲ್ಲ. ದಿಃ 27.07.2023 ರಂದು ನಾನು ಪೊಲೀಸರಿಗೆ ನನ್ನ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ . ಸಾಕ್ಷಿ ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಆರೋಪಿತರು ನಮ್ಮ ಸಂಬಂಧಿಕರು ಎಂದರೆ ಸರಿ. ಆರೋಪಿತರು ನಮ್ಮ ವಿರುದ್ಧ ಸಿ ಸಿ ನಂಬರ್ 634/2023 ರಂತೆ ಪ್ರಕರಣ ದಾಖಲಿಸಿದ್ದಾರೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಆರೋಪಿತರೊಂದಿಗೆ ರಾಜೀಯಾಗಿದ್ದೇನೆಂದರೆ ಸರಿ. ನಿಪಿ-1

ರಂತೆ ದೂರು ನೀಡಿ, ನಿಪಿ-2 ರಂತೆ ಮಹಜರ್ ಕಾಲದಲ್ಲಿ ಹಾಜರಿದ್ದು , ನಿಪಿ-4 ರಂತೆ ಮರು ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿಗಳ ಪರ ಶ್ರೀ ಓ ಎಂ ವಕೀಲರಿಂದ

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.